# ಭಯ ಬಿಡಿ, ದೂರು ನೀಡಿ

■ ಆದಿತ್ಯ ಕೆ.ಎ.

**ರಾಷ್ಟ್ರೀಯ ಮಹಿಳಾ ಸಹಾಯವಾಣಿ ಸಂಖ್ಯೆ 181 ಮತ್ತು ಸೈಬರ್ ಅಪರಾಧ ಸಹಾಯವಾಣಿ 1930ಗೆ ಕರೆ ಮಾಡಿ ಮಾಹಿತಿ ನೀಡಬಹುದು.**

ಸಾಮಾಜಿಕ ಜಾಲತಾಣಗಳಲ್ಲಿ ಇತರರಿಗೆ ಬೆದರಿಕೆ ಹಾಕುವ, ಕಿರುಕುಳ ನೀಡುವ, ಅಶ್ಲೀಲ ಚಿತ್ರ ಕಳುಹಿಸುವ ಹಾಗೂ ಕೇಡು ಬಗೆಯುವ ಸಂದೇಶಗಳನ್ನು ಹಾಕುವ ಮೂಲಕ ಕೆಲವರನ್ನು ಗೇಲಿ ಮಾಡಲಾಗುತ್ತಿದೆ. ಮತ್ತೆ ಕೆಲವರನ್ನು ಮಾನಸಿಕ ಹಿಂಸೆಗೆ ಒಳಗಾಗುವಂತೆ ಮಾಡಲಾಗುತ್ತಿದೆ. ನಕಲಿ ಖಾತೆದಾರರು, ತಮ್ಮ ಗುರುತು ಮುಚ್ಚಿಟ್ಟು ಈ ರೀತಿಯ ಸಂದೇಶಗಳನ್ನು ಕಳುಹಿಸುತ್ತಿದ್ದಾರೆ.

ಸಮಾಜದಲ್ಲಿ ನಡೆಯುವ ಯಾವುದಾದರೂ ಘಟನೆಯ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಪ್ರತಿಕ್ರಿಯಿಸಿದ್ದರೆ ಬೇರೊಂದು ಗುಂಪು ಕಾಲೆಳೆಯುವ ಕೆಲಸ ಮಾಡುತ್ತಿದೆ. ಈ ರೀತಿಯ ಘಟನೆಗಳು ಸಮಾಜದಲ್ಲಿ ಸಾಮಾನ್ಯ ಎನ್ನುವಂತೆ ಆಗಿದೆ.

ರಾಜ್ಯ ಪೊಲೀಸರು ಸಾಮಾಜಿಕ ಜಾಲತಾಣಗಳ ಮೇಲೆ ಹದ್ದಿನ ಕಣ್ಣಿಟ್ಟಿದ್ದಾರೆ. ಕಿಡಿಗೇಡಿಗಳ ವಿರುದ್ಧ ಕಾನೂನು ಕ್ರಮ ಜರುಗಿಸುತ್ತಿದ್ದಾರೆ. ಗುರುತು ಮುಚ್ಚಿಟ್ಟು ಅಶ್ಲೀಲ ಸಂದೇಶ ಕಳುಹಿಸಿದವರನ್ನು ಬಂಧಿಸಿ ಜೈಲಿಗೆ ಅಟ್ಟುತ್ತಿದ್ದಾರೆ.

ಆನ್‌ಲೈನ್ ಮೇಲೆ ನಿಗಾ ವಹಿಸಲು ರಾಜ್ಯದ ಪ್ರತಿ ಠಾಣೆಯಲ್ಲೂ ಸಾಮಾಜಿಕ ಜಾಲತಾಣಗಳ ವಿಭಾಗ ಇದೆ. ಪ್ರತ್ಯೇಕ ಸಿಬ್ಬಂದಿಯನ್ನು ನೇಮಕ ಮಾಡಿ ಅವರಿಗೆ ತರಬೇತಿ ಕೊಡಲಾಗಿದೆ. ಅವರು ಈ ಜಾಲತಾಣಗಳ ಮೇಲೆ ನಿಗಾ ವಹಿಸುತ್ತಿದ್ದಾರೆ. ಯಾವುದಾದರೂ ಖಾತೆಗಳಲ್ಲಿ ಅಶ್ಲೀಲ ಚಿತ್ರಗಳು ಕಂಡುಬಂದರೆ ಅಳಿಸಿ ಹಾಕುತ್ತಿದ್ದಾರೆ. ಅಲ್ಲದೆ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.




> ◆ ಸಾಮಾಜಿಕ ಜಾಲತಾಣಗಳಲ್ಲಿ ಅಶ್ಲೀಲ ಹಾಗೂ ಬೆದರಿಕೆ ಸಂದೇಶ ಕಳುಹಿಸಿದ್ದವರನ್ನು ತ್ವರಿತವಾಗಿ ಪತ್ತೆಹಚ್ಚಿ ಬಂಧಿಸಲಾಗುತ್ತಿದೆ. ಕಿಡಿಗೇಡಿಗಳು ಹಾಕಿದ್ದ ಪೋಸ್ಟ್‌ಗಳನ್ನು ಅಳಿಸಲಾಗುತ್ತಿದೆ. ಕೆಲವು ಖಾತೆಗಳನ್ನೂ ಜಾಲತಾಣಗಳಿಂದ ತೆಗೆದು ಹಾಕಲಾಗುತ್ತಿದೆ.
>
> **-ಎಂ.ಎ. ಸಲೀಂ,** ರಾಜ್ಯ ಪೊಲೀಸ್ ಮಹಾನಿರ್ದೇಶಕ

ಇನ್ನು ಯಾರಿಗಾದರೂ ಅಶ್ಲೀಲ ಸಂದೇಶ, ಕೊಲೆ ಬೆದರಿಕೆ ಬಂದಿದ್ದರೆ ಅವರು ಏನು ಮಾಡಬೇಕೆಂಬ ಪ್ರಶ್ನೆ ಮೂಡುತ್ತದೆ. ಅವರು ಆತಂಕಕ್ಕೆ ಒಳಗಾವುದು ಬೇಡ ಎನ್ನುತ್ತಾರೆ ಸೈಬರ್ ಪೊಲೀಸ್ ಅಧಿಕಾರಿಯೊಬ್ಬರು.

‘ಟ್ರೋಲ್ ಆದರೆ ಭಯಪಡುವುದು ಬೇಡ. ಯಾವುದಾದರೂ ಖಾತೆಯಿಂದ ಅಶ್ಲೀಲ ಚಿತ್ರ ಹಾಗೂ ಬರಹ ಬಂದಿದ್ದರೆ ಪ್ರತಿಕ್ರಿಯೆ ಮಾಡದೇ ಅವುಗಳ ಸ್ಕ್ರೀನ್‌ಶಾಟ್‌ಗಳನ್ನು ತೆಗೆದುಕೊಳ್ಳಬೇಕು. ಸಂದೇಶ ಬಂದಿದ್ದ ಸಮಯವನ್ನು ಯಾವುದಾದರೂ ಪುಸ್ತಕದಲ್ಲಿ ನಮೂದು ಮಾಡಿಕೊಳ್ಳಬೇಕು. ತಕ್ಷಣವೇ ತಮ್ಮ ಮನೆಯ ಹತ್ತಿರದ ಪೊಲೀಸ್ ಠಾಣೆಗೆ ತೆರಳಿ ದೂರು ನೀಡಬೇಕು’ ಎಂದು ಪೊಲೀಸರು ಹೇಳುತ್ತಾರೆ.

ಹಿಂದೆ ಸೈಬರ್ ಅಪರಾಧಗಳ ಸಂಖ್ಯೆ ಕಡಿಮೆ ಇದ್ದವು. ಹೀಗಾಗಿ ಸೈಬರ್ ಕ್ರೈಂ ಪೊಲೀಸ್ ಠಾಣೆಗಳೂ ಹೆಚ್ಚಿನ ಸಂಖ್ಯೆಯಲ್ಲಿ ಇರಲಿಲ್ಲ. ಪ್ರಕರಣಗಳು ಹೆಚ್ಚಾದಂತೆ ಸೈಬರ್ ಪೊಲೀಸ್ ಠಾಣೆಗಳನ್ನೂ ಹೆಚ್ಚಿಸಲಾಗಿದೆ. ಅಲ್ಲದೆ ಕಾನೂನು ಮತ್ತು ಸುವ್ಯವಸ್ಥೆ ಠಾಣೆಗಳಲ್ಲೂ ದೂರು ನೀಡಲು ಅವಕಾಶ ಕಲ್ಪಿಸಲಾಗಿದೆ.

ಪ್ರತಿಯೊಬ್ಬರಿಗೆ ಅಭಿಪ್ರಾಯ ವ್ಯಕ್ತಪಡಿಸುವ ಹಕ್ಕು ಇದೆ. ಆದರೆ, ಮಿತಿಮೀರಿ ಟೀಕೆ ಮಾಡಲಾಗುತ್ತಿದೆ. ಬೇರೆಯವರ ಗೌರವಕ್ಕೆ ಧಕ್ಕೆ ತರುವಂತೆ ಮಾಡಲಾಗುತ್ತಿದೆ. ಅಲ್ಲದೆ ಸಮಾಜ ಸ್ವಾಸ್ಥ್ಯವನ್ನು ಹಾಳು ಮಾಡಲಾಗುತ್ತಿದೆ. ಆ ರೀತಿಯ ಪ್ರಕರಣಗಳು ಕಂಡುಬಂದರೆ ಮಾಹಿತಿ ತಂತ್ರಜ್ಞಾನ ಕಾಯ್ದೆ ಹಾಗೂ ಭಾರತೀಯ ನ್ಯಾಯ ಸಂಹಿತೆ ಕಾಯ್ದೆಯ ವಿವಿಧ ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುವುದು ಎಂದು ಅಧಿಕಾರಿಯೊಬ್ಬರು ಹೇಳಿದರು.




## ಯಾವೆಲ್ಲಾ ಸೆಕ್ಷನ್‌ಗಳಡಿ ಪ್ರಕರಣ?

ಅಶ್ಲೀಲ ಚಿತ್ರ ಕಳುಹಿಸಿದ್ದರೆ, ಜೀವ ಬೆದರಿಕೆ ಹಾಕಿದ್ದರೆ, ಕೀಳಾಗಿ ಸಂದೇಶ ಕಳುಹಿಸಿದ್ದರೆ ಅಂತಹ ಕಿಡಿಗೇಡಿಗಳ ವಿರುದ್ಧ ಸೆಕ್ಷನ್‌ಗಳಾದ 351(2) (ಕ್ರಿಮಿನಲ್ ಬೆದರಿಕೆಯ ಉದ್ದೇಶದ ಅಪರಾಧ), 351(3) (ಸಾವು, ತೀವ್ರ ನೋವುಂಟು ಮಾಡುವ ಉದ್ದೇಶದ ಕ್ರಿಮಿನಲ್ ಬೆದರಿಕೆ), 352 (ಉದ್ದೇಶಪೂರ್ವಕ ಅವಮಾನದ ಮೂಲಕ ಶಾಂತಿಭಂಗದ ಯತ್ನ), 75(1) (ಲೈಂಗಿಕ ಕಿರುಕುಳ), 75(1)(IV) (ಲೈಂಗಿಕ ಟೀಕೆ) ಹಾಗೂ 79 (ಮಹಿಳೆಯ ಗೌರವಕ್ಕೆ ಧಕ್ಕೆ) ಆರೋಪದ ಅಡಿ ಪ್ರಕರಣ ದಾಖಲಿಸಿಕೊಳ್ಳಲಾಗುವುದು. ಆರೋಪ ಸಾಬೀತಾದರೆ 5 ವರ್ಷದವರೆಗೂ ಜೈಲು ಶಿಕ್ಷೆ ಹಾಗೂ ದಂಡವಿದೆ ಎಂದು ಪೊಲೀಸರು ಹೇಳುತ್ತಾರೆ. ■